# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1143 |
| ಮಾನ್ಯ ಸದಸ್ಯರ ಹೆಸರು | : | ಡಾ: ಎಂ.ಜಿ.ಮುಳೆ |
| ಉತ್ತರಿಸುವ ದಿನಾಂಕ | : | 13-03-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ಒಟ್ಟು ವಸತಿ ನಿಲಯಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ; (ತಾಲ್ಲೂಕುವಾರು ಮತ್ತು ಕಟ್ಟಡದ ಬಾಡಿಗೆ ಮೊತ್ತದ ವಿವರ ನೀಡುವುದು)</td><td>ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಯಲ್ಲಿ 61 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದ್ದು, ವಿವರ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವಿವರ</th><th>ದಾಖಲಾತಿ</th></tr>
<tr><td>01</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ</td><td>42</td></tr>
<tr><td>02</td><td>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ</td><td>19</td></tr>
<tr><td></td><td>ಒಟ್ಟು :</td><td>61</td></tr>
</table>
ಸದರಿ ವಿದ್ಯಾರ್ಥಿನಿಲಯಗಳ ಪೈಕಿ ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಿರ್ವಹಿಸಲಾಗುತ್ತಿರುವ ವಿದ್ಯಾರ್ಥಿ ನಿಲಯಗಳ ವಿವರ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವಿವರ</th><th>ಸ್ವಂತ ಕಟ್ಟಡ</th><th>ಬಾಡಿಗೆ ಕಟ್ಟಡ</th></tr>
<tr><td>01</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ</td><td>40</td><td>02</td></tr>
<tr><td>02</td><td>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ</td><td>17</td><td>02</td></tr>
<tr><td></td><td>ಒಟ್ಟು :</td><td>57</td><td>04</td></tr>
</table>
ತಾಲ್ಲೂಕುವಾರು ಬಾಡಿಗೆ ಕಟ್ಟಡದ ವಿವರವನ್ನು ಅನುಬಂಧ-1ರಲ್ಲಿ ನೀಡಿದೆ.</td></tr>
<tr><td>(ಆ)</td><td>ಅನೇಕ ವಸತಿ ನಿಲಯಗಳಲ್ಲಿ ಮಂಜೂರಾದ ಸಂಖ್ಯಾ ಬಲಕ್ಕಿಂತ ಶೇ. 20 ರಿಂದ 30 ರಷ್ಟು ಹೆಚ್ಚು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಆ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸಿಗೆ, ಕೊಠಡಿ ಮತ್ತು ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು;</td><td>ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ. ಮುಂದುವರೆದು ಆಯಾ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಕಲ್ಪಿಸಬಹುದಾದ ಗರಿಷ್ಠ ವಿದ್ಯಾರ್ಥಿಗಳಿಗೆ ಮಿತಿಗೊಳಿಸಿ (PERMISSIBLE STRENGTH) ಹೆಚ್ಚುವರಿಯಾಗಿ ಪ್ರವೇಶಾತಿ ನೀಡಲಾಗುತ್ತಿದ್ದು, ಅದಕ್ಕಿಂತ ಹೆಚ್ಚಿನದಾಗಿ ಪ್ರವೇಶ ಕೋರಿ ಬರುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ</td></tr>
</table>

---2

| | | |
|---|---|---|
| | | ಹೆಚ್ಚುವರಿಯಾಗಿ ಬಾಡಿಗೆ ಕಟ್ಟಡ ಪಡೆದು ಪ್ರವೇಶ ಕಲ್ಪಿಸಲಾಗುತ್ತಿದೆ.<br><br>ಸಮಾಜ ಕಲ್ಯಾಣ ಇಲಾಖೆಯ ಸ್ವಂತ ಕಟ್ಟಡಗಳಲ್ಲಿ ನಡೆಸುತ್ತಿರುವ ಡಾ.ಬಿ.ಆರ್.ಅಂಬೇಡ್ಕರ್ ವಿದ್ಯಾರ್ಥಿ ನಿಲಯಗಳ ಪೈಕಿ ಮಂಜೂರಾತಿ ಸಂಖ್ಯೆಗಿಂತ ದಾಖಲಾತಿ ಸಂಖ್ಯೆ ಹೆಚ್ಚಾಗಿರುವ ವಿದ್ಯಾರ್ಥಿ ನಿಲಯಗಳಲ್ಲಿ ಅನುದಾನದ ಲಭ್ಯತೆಗೆ ಅನುಗುಣವಾಗಿ ಹೆಚ್ಚುವರಿ ವಾಸದ ಕೊಠಡಿ, ಶೌಚಾಲಯ, ಸ್ನಾನಗೃಹಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ. |
| (ಇ) | ಕಳೆದ ಎರಡು ವರ್ಷಗಳಲ್ಲಿ ವಸತಿ ನಿಲಯಗಳ ದುರಸ್ತಿ, ನವೀಕರಣ ಮತ್ತು ಪೀಠೋಪಕರಣ ಖರೀದಿಗಾಗಿ ಬಿಡುಗಡೆಯಾದ ಅನುದಾನವೆಷ್ಟು; ಇದರಲ್ಲಿ ಎಷ್ಟು ಹಣ ಬಳಕೆಯಾಗಿದೆ ಮತ್ತು ಬಾಕಿ ಉಳಿದಿರುವ ಅನುದಾನಕ್ಕೆ ಕಾರಣಗಳೇನು;<br>(ಕಾಮಗಾರಿಗಳವಾರು ವಿವರ ಒದಗಿಸುವುದು) | ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ ಡಾ\|\| ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯ ದುರಸ್ತಿ/ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳಲು ಕಳೆದ ಎರಡು ವರ್ಷಗಳಲ್ಲಿ ಅನುದಾನ ಬಿಡುಗಡೆ ಮಾಡಿರುವುದಿಲ್ಲ, ಹಾಗೂ ರಾಜ್ಯವಲಯದಿಂದ ಯಾವುದೇ ಪೀಠೋಪಕರಣಗಳನ್ನು ಖರೀದಿಸಿ ಪೂರೈಸಲಾಗಿರುವುದಿಲ್ಲ. |
| (ಈ) | ವಸತಿ ನಿಲಯಗಳಲ್ಲಿ ಇತ್ತೀಚೆಗೆ ಕಳಪೆ ಗುಣಮಟ್ಟದ ಆಹಾರ ಸರಬರಾಜು ಮತ್ತು ಅಶುಚಿತ್ವದ ಕುರಿತು ಸಲ್ಲಿಕೆಯಾದ ದೂರುಗಳ ಸಂಖ್ಯೆ ಎಷ್ಟು; ನಿಯಮ ಉಲ್ಲಂಘಿಸಿದ ಎಷ್ಟು ಮಂದಿ ಗುತ್ತಿಗೆದಾರರು ಹಾಗು ವಾರ್ಡನ್‌ಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆ; | ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ ಅಂತಹ ಯಾವುದೇ ದೂರುಗಳು ಸಲ್ಲಿಕೆಯಾಗಿರುವುದಿಲ್ಲ. |
| (ಉ) | ಜಿಲ್ಲೆಯ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಟ್ಟಿದೆ ಮತ್ತು "ಮಾದರಿ ವಸತಿ ನಿಲಯಗಳ" (Model Hostels) ನಿರ್ಮಾಣ ಪ್ರಸ್ತಾವನೆ ಯಾವ ಹಂತದಲ್ಲಿದೆ? | ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ 04 ಡಾ.ಬಿ.ಆರ್.ಅಂಬೇಡ್ಕರ್ ವಿದ್ಯಾರ್ಥಿ ನಿಲಯಗಳ ಪೈಕಿ 02 ವಿದ್ಯಾರ್ಥಿ ನಿಲಯಗಳಿಗೆ 2024-25ನೇ ಸಾಲಿನಲ್ಲಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ರೂ.14.00 ಕೋಟಿಗಳಿಗೆ ಮಂಜೂರಾತಿ ನೀಡಲಾಗಿರುತ್ತದೆ. 01 ವಿದ್ಯಾರ್ಥಿ ನಿಲಯಕ್ಕೆ ಪ್ರಸಕ್ತ ಸಾಲಿನಲ್ಲಿ ರೂ.7.00 ಕೋಟಿಗಳ ಅಂದಾಜು ಮೊತ್ತದಲ್ಲಿ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ. ಬಾಕಿ 01 ವಿದ್ಯಾರ್ಥಿ ನಿಲಯಕ್ಕೆ ನಿವೇಶನ ಪಡೆಯಲು ಕ್ರಮವಹಿಸಲಾಗುತ್ತಿದೆ. ವಿವರ ಈ ಕೆಳಕಂಡಂತಿದೆ. |

---3

| ಕ್ರ. ಸಂ. | ವಿದ್ಯಾರ್ಥಿ ನಿಲಯದ ವಿವರ | ನಿರ್ಮಾಣ ಕಾಮಗಾರಿಯ ಹಂತ |
|---|---|---|
| 1. | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಹುಲಸೂರ, ಬಸವಕಲ್ಯಾಣ ತಾಲ್ಲೂಕು | 2024-25ನೇ ಸಾಲಿನಲ್ಲಿ ಮಂಜೂರಾತಿ ನೀಡಲಾಗಿದೆ |
| 2. | ಪ್ರಥಮ ದರ್ಜೆ ಕಾಲೇಜು ಬಾಲಕರ ವಿದ್ಯಾರ್ಥಿ ನಿಲಯ, ನೌಬಾದ, ಬೀದರ್ | 2024-25ನೇ ಸಾಲಿನಲ್ಲಿ ಮಂಜೂರಾತಿ ನೀಡಲಾಗಿದೆ |
| 3. | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಬೀದರ್ ಟೌನ್ | ಪ್ರಸಕ್ತ ಸಾಲಿನಲ್ಲಿ ನಿರ್ಮಾಣಕ್ಕೆ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. |
| 4. | ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಭಾಲ್ಕಿ | ನಿವೇಶನ ಪಡೆಯಲು ಕ್ರಮವಹಿಸಲಾಗುತ್ತಿದೆ |

ಮುಂದುವರೆದು, ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ "ಮಾದರಿ ವಸತಿ ನಿಲಯಗಳ" (Model Hostels) ನಿರ್ಮಾಣದ ಪ್ರಸ್ತಾವನೆಯು ಸ್ವೀಕೃತವಾಗಿರುವುದಿಲ್ಲ. ಸ್ವೀಕೃತವಾದಲ್ಲಿ, ನಿಯಮಾನುಸಾರ ಪರಿಶೀಲಿಸಲಾಗುವುದು.

**ಸಕಇ 247 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

ಅನುಬಂಧ-1

**ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಡಾ.ಎಂ.ಜಿ.ಮುಳೆ(ವಿಧಾನ ಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ1065(1143) ಕ್ಕೆ ಅನುಬಂಧ-1**

| ಕ್ರ.ಸಂ | ತಾಲ್ಲೂಕಿನ ಹೆಸರು | ವಿದ್ಯಾರ್ಥಿ ನಿಲಯದ ವಿವರ | ಮಾಸಿಕ ಬಾಡಿಗೆ ಪಾವತಿ ಮಾಡುತ್ತಿರುವ ಮೊತ್ತ |
|---|---|---|---|
| 1 | ಔರದ್(ಬಿ) | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರವಿದ್ಯಾರ್ಥಿ ನಿಲಯ ಔರದ್ ಟೌನ್. | 93,800/- |
| 2 | ಬಸವಕಲ್ಯಾಣ | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರವಿದ್ಯಾರ್ಥಿ ನಿಲಯ ಹುಲಸೂರ. | 41,500/- |
| 3 | ಬೀದರ್ | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ ಬೀದರ್ ನಗರ. | 81,900/- |
| | | ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ ಬೀದರ್. | 50,900/- |

**ಆಯುಕ್ತರ ಪರವಾಗಿ**
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು